ಸಿ ಸಿ ನಂ. 5044/2023
ಪಿ.ಡಬ್ಲ್ಯೂ- 1

**ಸಾಕ್ಷಿಯು ದಿನಾಂಕಃ 13-08-2024 ರಂದು ವಿಚಾರಣೆಗಾಗಿ ಹಾಜರಾಗಿದ್ದು ಅವರಿಗೆ ಪ್ರಮಾಣ ವಚನವನ್ನು ಬೋಧಿಸಲಾಯಿತು.**

**ಮುಖ್ಯ ವಿಚಾರಣೆಃ ಶ್ರೀ ಜಿ. ವಿ. ಪಿ., ವಕೀಲರಿಂದ**

ನಾನು ಈಗಾಗಲೇ ನನ್ನ ಪ್ರಮಾಣೀಕೃತ ಹೇಳಿಕೆಯನ್ನು ಪ್ರಮಾಣ ಪತ್ರದ ರೂಪದಲ್ಲಿ ಸಲ್ಲಿಸಿರುತ್ತೇನೆ. ಸದರಿ ಪ್ರಮಾಣ ಪತ್ರದಲ್ಲಿನ ಅಂಶಗಳು ಸತ್ಯದಿಂದ ಕೂಡಿರುತ್ತವೆ. ಅದರಲ್ಲಿನ ಸಹಿ ನನ್ನದೇ ಆಗಿರುತ್ತದೆ.

ದಿಃ **01-07-2023** ರ ಚೆಕ್ ಹಾಜರುಪಡಿಸಿರುತ್ತೇನೆ. ಅದನ್ನು ನಿಪಿಃ **1** ಎಂದು ಗುರುತಿಸಲಾಯಿತು. ದಿಃ **11-08-2023** ಮತ್ತು **16-09-2023** ರ ಬ್ಯಾಂಕಿನ ಹಿಂಬರಹವನ್ನು ಹಾಜರುಪಡಿಸಿರುತ್ತೇನೆ. ಅವುಗಳನ್ನು ನಿಪಿಃ **2** ಮತ್ತು **3** ಎಂದು ಗುರುತಿಸಲಾಯಿತು. ದಿಃ **03-10-2023** ರಂದು ಆರೋಪಿಗೆ ನೀಡಿರುವ ಲೀಗಲ್ ನೋಟಿಸ್ಸಿನ ಕಛೇರಿ ಪ್ರತಿಯನ್ನು ಹಾಜರುಪಡಿಸಿರುತ್ತೇನೆ. ಅದನ್ನು ನಿ.ಪಿ.- **4** ಎಂದು ಗುರುತಿಸಲಾಯಿತು. ಅಂಚೆ ರಸೀದಿಗಳನ್ನು ಹಾಜರುಪಡಿಸಿರುತ್ತೇನೆ. ಅವುಗಳನ್ನು ನಿ.ಪಿ.- **5** ಮತ್ತು **6** ಎಂದು ಗುರುತಿಸಲಾಯಿತು. ಅಂಚೆ ಸ್ವೀಕೃತ ಪತ್ರಗಳನ್ನು ಹಾಜರುಪಡಿಸಿರುತ್ತೇನೆ. ಅವುಗಳನ್ನು ನಿ.ಪಿ.- **7** ಮತ್ತು **8** ಎಂದು ಗುರುತಿಸಲಾಯಿತು. **6** ಬಿಲ್ ಗಳನ್ನು ಹಾಜರುಪಡಿಸಿರುತ್ತೇನೆ. ಅವುಗಳನ್ನು ನಿ.ಪಿ.- **9** ರಿಂದ **14** ಎಂದು ಗುರುತಿಸಲಾಯಿತು. ಜಿ ಎಸ್ ಟಿ ನೋಂದಣಿ ಪ್ರಮಾಣ ಪತ್ರವನ್ನು ಹಾಜರುಪಡಿಸಿರುತ್ತೇನೆ. ಅದನ್ನು ನಿ.ಪಿ.- **15** ಎಂದು ಗುರುತಿಸಲಾಯಿತು. ಪ್ರಕರಣ ನಡೆಸಲು ನನಗೆ ಪಿರ್ಯಾದುದಾರರ ಕಂಪನಿ ನೀಡಿರುವ ಅಧಿಕಾರ ಪತ್ರವನ್ನು ಹಾಜರುಪಡಿಸಿರುತ್ತೇನೆ. ಅದನ್ನು ನಿ.ಪಿ.- **16** ಎಂದು ಗುರುತಿಸಲಾಯಿತು.

**ಮುಂದುವರೆದ ಮುಖ್ಯ ವಿಚಾರಣೆಗೆ ಸಮಯ ಕೋರಿದ್ದು, ಮುಂದೂಡಲಾಯಿತು.**

(ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.)

ಓ. ಹೆ. ಕೇ. ಸರಿ ಇದೆ.

ಪ್ರಧಾನ ದಿವಾಣಿ ನ್ಯಾಯಾಧೀಶರು
ಹಾಗೂ ಜೆ ಎಂ ಎಫ್ ಸಿ., ಹೊಸಪೇಟೆ.